ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**17.01.2026 7.35 pm**

**<>><><*><><<>**

ಮುಖ್ಯಾಂಶಗಳು

**೧. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದ ಪಶ್ಚಿಮ ಬಂಗಾಳದ ಮಾಲ್ಡಾದಲ್ಲಿ ೩ ಸಾವಿರದ ೨೫೦ ಕೋಟಿಗೂ ಹೆಚ್ಚು ಮೌಲ್ಯದ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ**

**೨. ಭಾರತವನ್ನು ಸ್ವಾವಲಂಬಿ ಮತ್ತು ಅಭಿವೃದ್ಧಿ ಹೊಂದಿದ ದೇಶವನ್ನಾಗಿ ರೂಪಿಸುವಲ್ಲಿ ಮುಂದಿನ ೨ ದಶಕಗಳು ನಿರ್ಣಾಯಕ - ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್**

**೩. ದೇಶಾದ್ಯಂತ ಇಂದಿನಿಂದ ಡಾಲ್ಫಿನ್ ಗಣತಿ ಆರಂಭ; ಪ್ರಾಜೆಕ್ಟ್ ಡಾಲ್ಫಿನ್ ಅಡಿಯಲ್ಲಿ ಎರಡು ಹಂತಗಳಲ್ಲಿ ಸಮೀಕ್ಷೆ**

**೪. ಜಿಂಬಾಬ್ವೆಯಲ್ಲಿ ನಡೆಯುತ್ತಿರುವ ೧೯ ವರ್ಷದೊಳಗಿನವರ ವಿಶ್ವಕಪ್ ಕ್ರಿಕೆಟ್ : ಭಾರತ ನೀಡಿರುವ ೨೩೮ ರನ್ ಗುರಿ ಬೆನ್ನತ್ತಿರುವ ಬಾಂಗ್ಲಾದೇಶ**

**<>><><*><><<>**

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪಶ್ಚಿಮ ಬಂಗಾಳದ ಮಾಲ್ಡಾದಲ್ಲಿ ಇಂದು ೩ ಸಾವಿರದ ೨೫೦ ಕೋಟಿಗೂ ಹೆಚ್ಚು ಮೌಲ್ಯದ ಅಭಿವೃದ್ಧಿ ಯೋಜನೆಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ನಾಲ್ಕು ಹೊಸ ಅಮೃತ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ ಹಸಿರು ನಿಶಾನೆ ತೋರಿದ್ದು, ಇದು ರಾಜ್ಯದಲ್ಲಿ ರೈಲು ಸಂಪರ್ಕ ಮತ್ತು ಮೂಲಸೌಕರ್ಯಕ್ಕೆ ಪ್ರಮುಖ ಉತ್ತೇಜನ ನೀಡಿದೆ. ಬಳಿಕ ಮಾತನಾಡಿದ ಪ್ರಧಾನಮಂತ್ರಿ, ಪಶ್ಚಿಮ ಬಂಗಾಳದ ಪ್ರಗತಿಯನ್ನು ವೇಗಗೊಳಿಸುವ ಅಭಿಯಾನವು ಮಾಲ್ಡಾದಿಂದ ಹೊಸ ವೇಗವನ್ನು ಪಡೆದುಕೊಂಡಿದೆ, ಯುವಕರಿಗೆ ಪ್ರಯಾಣ, ವ್ಯಾಪಾರ ಮತ್ತು ಉದ್ಯೋಗಾವಕಾಶಗಳನ್ನು ಸುಧಾರಿಸುವ ಗುರಿಯನ್ನು ಹೊಂದಿರುವ ಯೋಜನೆಗಳೊಂದಿಗೆ. ಈ ರೈಲು ವಿಕಸಿತ ಭಾರತ ಮುನ್ನೋಟದ ಪ್ರತಿಬಿಂಬವಾಗಿದೆ ಎಂದರು. ಭಾರತದ ಮೊದಲ ವಂದೇ ಭಾರತ್ ಸ್ಲೀಪರ್ ರೈಲು ಸೇವೆ ಆರಂಭವಾಗಿದ್ದು, ಇದು ಪಶ್ಚಿಮ ಬಂಗಾಳದ ಹೌಡಾ ಮತ್ತು ಅಸ್ಸಾಂನ ಗುವಾಹಟಿಯನ್ನು ಸಂಪರ್ಕಿಸಲಿದೆ. ಹೊಸ ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಉತ್ತರ ಬಂಗಾಳವನ್ನು ದಕ್ಷಿಣ ಮತ್ತು ಪಶ್ಚಿಮ ಭಾರತದೊಂದಿಗೆ ಸಂಪರ್ಕಿಸಲಿದ್ದು, ಕರ್ನಾಟಕ, ತಮಿಳುನಾಡು ಮತ್ತು ಮಹಾರಾಷ್ಟ್ರದೊಂದಿಗೆ ಸಂಪರ್ಕ ಬಲಪಡಿಸಲಿದೆ. ವಿದ್ಯುದ್ದೀಕರಣ, ನಿಲ್ದಾಣ ಪುನರಾಭಿವೃದ್ಧಿ ಮತ್ತು ದೇಶಾದ್ಯಂತ ೧೫೦ ಕ್ಕೂ ಹೆಚ್ಚು

ವಂದೇ ಭಾರತ್ ರೈಲುಗಳ ಸಂಚಾರದೊಂದಿಗೆ ರೈಲ್ವೆ ವೇಗವಾಗಿ ಆಧುನೀಕರಣಗೊಳ್ಳುತ್ತಿದೆ ಎಂದು ಪ್ರಧಾನಮಂತ್ರಿ ಹೇಳಿದ್ದಾರೆ.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ**

**<>><><*><><<>**

ಭಾರತವನ್ನು ಆತ್ಮನಿರ್ಭರ ಮತ್ತು ಅಭಿವೃದ್ಧಿ ಹೊಂದಿದ ದೇಶವನ್ನಾಗಿ ರೂಪಿಸುವಲ್ಲಿ ಮುಂದಿನ ೨ ದಶಕಗಳು ನಿರ್ಣಾಯಕ ಪಾತ್ರ ವಹಿಸಿವೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ತಿಳಿಸಿದ್ದಾರೆ. ಡೆಹ್ರಾಡೋನ್‌ನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಉತ್ತರಾಖಂಡ ರಾಜ್ಯವು ನವೀಕರಿಸಬಹುದಾದ ಇಂಧನ, ಸಾವಯುವ ಕೃಷಿ, ನವೋದ್ಯಮ, ಪ್ರವಾಸೋದ್ಯಮ ಮತ್ತು ಕೌಶಲ್ಯಾಭಿವೃದ್ಧಿಯಲ್ಲಿ ದೇಶದ ಅಭಿವೃದ್ಧಿಗೆ ಹೆಚ್ಚು ಕೊಡುಗೆ ನೀಡುವ ಸಾಮರ್ಥ್ಯವನ್ನು ಹೊಂದಿದ್ದು ಅಭಿವೃದ್ಧಿಯಲ್ಲಿ ಹೊಸ ಎತ್ತರಕ್ಕೆ ಏರಲಿದೆ ಎಂದರು. ಪ್ರಜಾಪ್ರಭುತ್ವದ ೪ನೇ ಸ್ತಂಭವಾಗಿ ಮಾಧ್ಯಮಗಳ ಪಾತ್ರ ಮಹತ್ವದ್ದಾಗಿದ್ದು, ಯುವಜನರಲ್ಲಿ ಸಕಾರಾತ್ಮಕ ಚಿಂತನೆ ಬಲಪಡಿಸಲು ಸಹಕರಿಸುವ ಸಕಾರಾತ್ಮಕ ಮತ್ತು ಅಭಿವೃದ್ಧಿ ಆಧಾರಿತ ಉಪಕ್ರಮಗಳಿಗೆ ಪ್ರಾಮುಖ್ಯತೆ ನೀಡಬೇಕೆಂದು ಅವರು ಮಾಧ್ಯಮಗಳಿಗೆ ಒತ್ತಾಯಿಸಿದರು. ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವದಲ್ಲಿ ಉತ್ತರಾಖಂಡ ರಸ್ತೆ, ರೈಲ್ವೆ, ವೈಮಾನಿಕ ಮತ್ತು ಸಂವಹನ ಸಂಪರ್ಕ ಕ್ಷೇತ್ರದಲ್ಲಿ ಕಳೆದ ದಶಕದಲ್ಲಿ ಗಮನಾರ್ಹ ಪ್ರಗತಿ ಸಾಧಿಸಿದೆ ಎಂದು ಅವರು ಹೇಳಿದರು.

**<>><><*><><<>**

ಕೇಂದ್ರ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಉದ್ದಿಮೆಗಳ ಸಚಿವಾಲಯ-ಎಮ್.ಎಸ್.ಎಮ್.ಇ ನವದೆಹಲಿಯಲ್ಲಿ ನಾಳೆಯಿಂದ ತಿಂಗಳಾಂತ್ಯದವರೆಗೆ ಪಿಎಂ ವಿಶ್ವಕರ್ಮ ಹಾತ್ ೨೦೨೬ ಆಯೋಜಿಸಿದೆ. ಕೇಂದ್ರ ಎಂ.ಎಸ್.ಎಂ.ಇ ಸಚಿವ ಜಿತನ್ ರಾಮ್ ಮಾಂಝಿ ಪ್ರದರ್ಶನವನ್ನು ಉದ್ಘಾಟಿಸಲಿದ್ದು, ಎಂ.ಎಸ್.ಎಂ.ಇ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಉಪಸ್ಥಿತರಿರಲಿದ್ದಾರೆ. ಕುಶಲಕರ್ಮಿಗಳು ತಮ್ಮ ಕರಕುಶಲ ಉತ್ಪನ್ನಗಳನ್ನು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಖರೀದಿದಾರರು, ಪಾಲುದಾರರು ಮತ್ತು ಸಾರ್ವಜನಿಕರಿಗೆ ಪ್ರದರ್ಶಿಸಲು ಮತ್ತು ಮಾರಾಟ ಮಾಡಲು ಪ್ರಮುಖ ವೇದಿಕೆಯನ್ನು ಒದಗಿಸುವ ಜೊತೆಗೆ ಪ್ರಧಾನಮಂತ್ರಿ ವಿಶ್ವಕರ್ಮ ಹಾತ್ ೨೦೨೬, ಭಾರತದ ಶ್ರೀಮಂತ ಸಾಂಪ್ರದಾಯಿಕ ಕರಕುಶಲ ಪರಂಪರೆಯನ್ನು ಆಚರಿಸುವ ಮತ್ತು ಪ್ರದರ್ಶಿಸುವ ಗುರಿಯನ್ನು ಹೊಂದಿದೆ. ದೇಶಾದ್ಯಂತದ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ೫೫೭ ಕ್ಕೂ ಹೆಚ್ಚು ಕುಶಲಕರ್ಮಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, ಇದು ಭಾರತದಾದ್ಯಂತದ ವೈವಿಧ್ಯಮಯ ಸಾಂಪ್ರದಾಯಿಕ ಕೌಶಲ್ಯ ಮತ್ತು ಕರಕುಶಲ ವಸ್ತುಗಳನ್ನು

ಪ್ರದರ್ಶಿಸಲಿದೆ. ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯ ಫಲಾನುಭವಿಗಳಿಗೆ ಮಾರುಕಟ್ಟೆ ಅವಕಾಶ ಹೆಚ್ಚಿಸಲು, ಲಭ್ಯತೆ ಸುಧಾರಿಸಲು ಮತ್ತು ಸುಸ್ಥಿರ ಜೀವನೋಪಾಯದ ಅವಕಾಶಗಳನ್ನು ಸೃಷ್ಟಿಸಲು ಹಾತ್ ಪ್ರಯತ್ನಿಸಲಿದೆ. ಪ್ರಧಾನಮಂತ್ರಿ ವಿಶ್ವಕರ್ಮ ಹಾತ್ ೨೦೨೬ ಕ್ಕೆ ವಿದೇಶಿ ಮಿಷನ್ ಗಳ ಪ್ರತಿನಿಧಿಗಳನ್ನು ಸಹ ಆಹ್ವಾನಿಸಲಾಗಿದೆ. ಪ್ರದರ್ಶನ ಬೆಳಗ್ಗೆ ೧೦.೩೦ ರಿಂದ ರಾತ್ರಿ ೧೦ ರವರೆಗೆ ಸಾರ್ವಜನಿಕರಿಗೆ ಮುಕ್ತವಾಗಿರಲಿದೆ.

**<>><><*><><<>**

ದೇಶಾದ್ಯಂತ ಇಂದಿನಿಂದ ಡಾಲ್ಫಿನ್ ಗಣತಿ ಆರಂಭವಾಗಿದೆ. ಉತ್ತರಪ್ರದೇಶದ ಬಿಜ್ನೋರ್‌ನಿಂದ ನದಿಪಾತ್ರದ ಮತ್ತು ನದಿಮುಖಜ ಭೂಮಿಯಲ್ಲಿ ವ್ಯಾಪಕ ಶ್ರೇಣಿಯ ಅಂದಾಜು ಕಾರ್ಯ ಪ್ರಾರಂಭವಾಗಿದೆ. ಪ್ರಾಜೆಕ್ಟ್ ಡಾಲ್ಫಿನ್ ಅಡಿಯಲ್ಲಿ ಎರಡು ಹಂತಗಳಲ್ಲಿ ಗಣತಿ ನಡೆಯಲಿದೆ ಎಂದು ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ತಿಳಿಸಿದೆ. ಮೊದಲ ಹಂತದಲ್ಲಿ ಗಂಗಾನದಿ ಮತ್ತು ಸಿಂಧೂನದಿ ಹರಿಯುವ ಪ್ರದೇಶಗಳಲ್ಲಿ ಗಣತಿ ನಡೆಯಲಿದ್ದು, ಎರಡನೇ ಹಂತದಲ್ಲಿ ಬ್ರಹ್ಮಪುತ್ರ ಮತ್ತು ಗಂಗೆಯ ಉಪನದಿಗಳು ಹರಿಯುವ ಪ್ರದೇಶಗಳಲ್ಲಿ ಸಮೀಕ್ಷೆ ನಡೆಯಲಿದೆ ಎಂದು ಸಚಿವಾಲಯ ತಿಳಿಸಿದೆ. ಈ ಸಮೀಕ್ಷೆಯು ಪ್ರಾಜೆಕ್ಟ್ ಡಾಲ್ಫಿನ್ ಅಡಿಯಲ್ಲಿ ಪ್ರಭೇದ ಅಂದಾಜು ಮತ್ತು ಸುಧಾರಿತ ಸಂರಕ್ಷಣೆಗೆ ಬೆಂಬಲ ನೀಡಲು ಪೂರಕವಾಗಲಿದೆ.

**<>><><*><><<>**

ಜಮ್ಮು ಮತ್ತು ಕಾಶ್ಮೀರದಲ್ಲಿ, ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಯ ಭಾಗವಾಗಿ, ಭದ್ರತಾ ಪಡೆಗಳು ಕಥುವಾ ಜಿಲ್ಲೆಯ ಬಿಲ್ಲಾವರ್ ತಹಸಿಲ್‌ನಲ್ಲಿ ಮೂರು ಭಯೋತ್ಪಾದಕ ಅಡಗುತಾಣಗಳನ್ನು ಪತ್ತೆಹಚ್ಚಿವೆ. ಬಿಲ್ಲಾವರ್‌ನ ಕಮಾದ್ ನಲ್ಲಾಹ್, ಕಾಲಾಬನ್ ಮತ್ತು ಧನ್ನು ಪರೋಲ್ ಅರಣ್ಯ ಪ್ರದೇಶಗಳಲ್ಲಿ ರಾಷ್ಟ್ರ ವಿರೋಧಿ ಶಕ್ತಿಗಳ ಚಲನವಲನದ ಬಗ್ಗೆ ಖಚಿತ ಮಾಹಿತಿಯ ಮೇರೆಗೆ, ಭದ್ರತಾ ಪಡೆಯ ಜಂಟಿ ತಂಡಗಳು ಭಯೋತ್ಪಾದಕರನ್ನು ತಟಸ್ಥಗೊಳಿಸಲು ಶೋಧ ಕಾರ್ಯಾಚರಣೆ ನಡೆಸಿವೆ. ಕಾರ್ಯಾಚರಣೆ ವೇಳೆ, ಭಯೋತ್ಪಾದಕರು ಭದ್ರತಾ ಪಡೆಗಳ ಮೇಲೆ ಏಕಾಏಕಿ ಗುಂಡು ಹಾರಿಸಿದ್ದು, ರಾತ್ರಿಯಿಡೀ ಗುಂಡಿನ ಚಕಮಕಿ ನಡೆಯಿತು. ಬುಧವಾರ ನಡೆದ ಶೋಧ ಕಾರ್ಯಾಚರಣೆಯಲ್ಲಿ, ಒಂದು ಭಯೋತ್ಪಾದಕ ಅಡಗುತಾಣ ಪತ್ತೆಯಾಗಿದೆ. ಗುರುವಾರ ಮುಂದುವರಿದ ಶೋಧ ಕಾರ್ಯಾಚರಣೆಯಲ್ಲಿ ಬಿಲ್ಲಾವರ್‌ನ ಕಾಲಿಖಾಡ್ ಮತ್ತು ಕಲಾಬನ್ ಪ್ರದೇಶಗಳಲ್ಲಿ ಜಂಟಿ ತಂಡಗಳು ಇನ್ನೂ ಎರಡು ಭಯೋತ್ಪಾದಕ ಅಡಗುತಾಣಗಳನ್ನು ಪತ್ತೆಹಚ್ಚಿವೆ.

**<>><><*><><<>**

ನವದೆಹಲಿಯಲ್ಲಿಂದು ಗಗನಯಾತ್ರಿ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರು ಭೂಮಿಯಿಂದ ಕಕ್ಷೆವರೆಗೆ ಬಾಹ್ಯಾಕಾಶ ಅನ್ವೇಷಣೆ ವಿಷಯಧಾರಿತ ವರ್ಚುಯಲ್ ರಿಯಾಲಿಟಿ ಥಿಯೇಟರ್ ಉದ್ಘಾಟಿಸಿದರು. ಆಕ್ಸಿಯಂ-೪ ಮಿಷನ್‌ನಲ್ಲಿ ಪಾಲ್ಗೊಂಡ ತಮ್ಮ ಅನುಭವವನ್ನು ಹಂಚಿಕೊಂಡ ಅವರು, ಬಾಹ್ಯಾಕಾಶ ಜೀವನ, ಕಾರ್ಯನಿರ್ವಹಣೆ, ತರಬೇತಿ ಮತ್ತು ಸವಾಲುಗಳ ಬಗ್ಗೆ ತಿಳಿಸಿದರು. ವಿವಿಧ ಶಾಲೆಗಳ ನಾನೂರಕ್ಕೂ ಹೆಚ್ಚು ಮಕ್ಕಳೊಂದಿಗೆ ಸಂವಾದ ನಡೆಸಿದ ಅವರು, ಬಾಹ್ಯಾಕಾಶ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ವೃತ್ತಿ ಆಯ್ಕೆಗೆ ಉತ್ತೇಜನ ನೀಡಿದರು. ಈ ಪ್ರದರ್ಶನವು, ಇಂದಿನಿಂದ ಸಾರ್ವಜನಿಕರಿಗೆ ಮುಕ್ತವಾಗಿದೆ.

**<>><><*><><<>**

ನವಿ ಮುಂಬೈನ ಡಾ.ಡಿ.ವೈ.ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ ನಡೆಯುತ್ತಿರುವ ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಫೀಲ್ಡಿಂಗ್ ಆಯ್ದುಕೊಂಡಿದೆ. ಇದಕ್ಕೂ ಮುನ್ನ ಇದೇ ಕ್ರೀಡಾಂಗಣದಲ್ಲಿ ನಡೆದ ಮುಂಬೈ ಇಂಡಿಯನ್ಸ್ ಹಾಗೂ ಯುಪಿ ವಾರಿಯರ್ಸ್ ನಡುವಿನ ದಿನದ ಮೊದಲ ಪಂದ್ಯದಲ್ಲಿ ಯುಪಿ ವಾರಿಯರ್ಸ್ ತಂಡ ಮುಂಬೈ ಇಂಡಿಯನ್ಸ್ ತಂಡವನ್ನು ೨೨ ರನ್ ಗಳಿಂದ ಮಣಿಸಿದೆ. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಯುಪಿ ವಾರಿಯರ್ಸ್ ತಂಡ ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೮೭ ರನ್ ಗಳಿಸಿತು. ಗುರಿ ಬೆನ್ನತ್ತಿದ ಮುಂಬೈ ಇಂಡಿಯನ್ಸ್ ೨೦ ಓವರ್‌ಗಳಲ್ಲಿ ೬ ವಿಕೆಟ್ ಕಳೆದುಕೊಂಡು ಕೇವಲ ೧೬೫ ರನ್‌ಗಳನ್ನಷ್ಟೇ ಗಳಿಸಲು ಶಕ್ತವಾಯಿತು.

**<>><><*><><<>**

ಭಾರತ - ಬಾಂಗ್ಲಾದೇಶ ನಡುವೆ ಜಿಂಬಾಬ್ವೆಯಲ್ಲಿ ೧೯ ವರ್ಷದೊಳಗಿನವರ ವಿಶ್ವ ಕಪ್ ಕ್ರಿಕೆಟ್ ಪಂದ್ಯ ಪ್ರಗತಿಯಲ್ಲಿದ್ದು ಮಳೆಯಿಂದಾಗಿ ಪಂದ್ಯವನ್ನು ೪೯ ಓವರ್ ಗಳಿಗೆ ಸೀಮಿತಗೊಳಿಸಲಾಗಿದೆ. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಭಾರತ ೪೯ ಓವರ್ ಪೂರ್ಣಗೊಳ್ಳಲು ಇನ್ನೂ ಎರಡು ಎಸೆತ ಬಾಕಿ ಇರುವಾಗಲೇ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೨೩೮ ರನ್ ಗಳಿಸಿತು. ಗುರಿ ಬೆನ್ನತ್ತಿರುವ ಬಾಂಗ್ಲಾದೇಶ ತಂಡ ಇತ್ತೀಚಿನ ವರದಿ ಬಂದಾಗ ೧೭.೨ ಓವರ್ ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೯೦ ರನ್ ಗಳಿಸಿ ಆಡುತ್ತಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>